1992-93ನೇ ಸಾಲಿನ ಕರ್ನಾಟಕ ಅರಣ್ಯ ಅಭಿವೃದ್ಧಿ ನಿಗಮ ನಿಯಮಿತದ 22ನೇ ವಾರ್ಷಿಕ ವರದಿಯನ್ನು ಮಂಡಿಸುತ್ತೇನೆ.

ಶ್ರೀ ಹಾರ್ನಳ್ಳಿ ರಾಮಸ್ವಾಮಿ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು) ಮಾನ್ಯ ಅಧ್ಯಕ್ಷರೆ,

VIII. ಶ್ರೀ ರಾಮಲಿಂಗಾರೆಡ್ಡಿ (ಭಾರಿ ಮತ್ತು ಮಧ್ಯಮ ಪ್ರಮಾಣದ ಕೈಗಾರಿಕಾ ರಾಜ್ಯ ಮಂತ್ರಿ) ಅವರ ಪರವಾಗಿ 1956ನೇ ಸಾಲಿನ ಕಂಪನಿಗಳ ಅಧಿನಿಯಮ 619 (ಎ) ಕಲಮಿನ ಮೇರೆಗೆ

1. 1992-93ನೇ ಸಾಲಿನ ಕರ್ನಾಟಕ ರೇಷ್ಮೆ ಮಾರಾಟ ಮಂಡಲಿ ನಿಯಮಿತದ 14ನೇ ವಾರ್ಷಿಕ ವರದಿ
2. 1992-93ನೇ ಸಾಲಿನ ದಿ ಮೈಸೂರು ಅಸಿಟೇಟ್ ಮತ್ತು ಕೆಮಿಕಲ್ಸ್ ಕಂಪನಿ ಲಿಮಿಟೆಡ್‌ನ 29ನೇ ವಾರ್ಷಿಕ ವರದಿ ಹಾಗೂ ಲೆಕ್ಕಪತ್ರಗಳು.
3. 1992-93ನೇ ಸಾಲಿನ ಚಾಮುಂಡಿ ಮೆಷಿನ್ ಟೂಲ್ಸ್ ಲಿಮಿಟೆಡ್‌ನ 17ನೇ ವಾರ್ಷಿಕ ವರದಿ
4. 1992-93ನೇ ಸಾಲಿನ ತುಂಗಭದ್ರಾ ಸ್ಟೀಲ್ ಪ್ರಾಡಕ್ಟ್ಸ್ ನಿಯಮಿತದ 33ನೆಯ ವಾರ್ಷಿಕ ವರದಿ

1966ನೇ ಸಾಲಿನ ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಅಧಿನಿಯಮದ 24(4)ನೇ ಕಲಮಿನ ಮೇರೆಗೆ

5. 1988-89ನೇ ಸಾಲಿನ ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿಯ ವಾರ್ಷಿಕ ವರದಿಗಳನ್ನು ಮಂಡಿಸುತ್ತೇನೆ.

ಅಧ್ಯಕ್ಷರು; ಎಲ್ಲಾ ಕಾಗದಪತ್ರಗಳನ್ನು ಸಭೆಯ ಮುಂದೆ ಮಂಡಿಸಲಾಯಿತು.

ಶ್ರೀ ಬಸವರಾಜ ರಾಯರೆಡ್ಡಿ: ಮಾನ್ಯ ಅಧ್ಯಕ್ಷರೇ, ತಾವು ಅಪ್ಪಣೆ ಕೊಡುತ್ತೀರೆಂದು ಭಾವಿಸಿಕೊಳ್ಳುತ್ತೇನೆ

ಅಧ್ಯಕ್ಷರು: ನಾನು ಕೊಡುತ್ತೇನೆ, ತಾವು ಕುಳಿತುಕೊಳ್ಳಿ.

ಶ್ರೀ ಎಂ. ವೀರಪ್ಪ ಮೊಯಿಲಿ: ಸನ್ಮಾನ್ಯ ಅಧ್ಯಕ್ಷರೆ, ಇವತ್ತು ವಿಶೇಷವಾದಂಥ ದುಃಖದಿಂದ ನಾನು ಕೆಲವು ವಿಚಾರಗಳನ್ನು ತಮ್ಮಲ್ಲಿ ಪ್ರಸ್ತಾಪ ಮಾಡಬೇಕೆಂದು ಆಪೇಕ್ಷೆ ಪಡುತ್ತಿದ್ದೇನೆ. ನಾವು ಜನಪ್ರತಿನಿಧಿಗಳು, ಪ್ರಜಾಪ್ರಭುತ್ವದ ಚೌಕಟ್ಟಿನಲ್ಲಿ ಈ ಸದನಕ್ಕೆ ನಾವು ಚುನಾಯಿತರಾಗಿ ಬಂದು ನಾವು ನಮ್ಮ ನಡವಳಿಕೆ ಏನು ಇರಬೇಕು ಎನ್ನುವುದಕ್ಕೆ ನಿಯಮಾವಳಿಗಳನ್ನು ಕೂಡ ರಚನೆ ಮಾಡಿಕೊಂಡು.....

ಶ್ರೀ ಬಸವರಾಜ ರಾಯರೆಡ್ಡಿ: ಮಾನ್ಯ ಅಧ್ಯಕ್ಷರೆ.....

(ಗೊಂದಲ)

ಶ್ರೀ ಎಂ. ವೀರಪ್ಪ ಮೊಯಿಲಿ: ಪ್ರಜಾಪ್ರಭುತ್ವವನ್ನು ಒತ್ತೆಯಿಟ್ಟು ಈ ಸದನವನ್ನು, ಕರ್ನಾಟಕ ರಾಜ್ಯ ಜನತೆಯನ್ನು ಇವತ್ತು ಬ್ಲಾಕ್ ಮೇಲೆ ಮಾಡತಕ್ಕ ನಿಮ್ಮ ಏನು ರಾಜಕೀಯ ಕುತಂತ್ರಗಳಿವೆ, ರಾಜಕೀಯ ಷಡ್ಯಂತ್ರಗಳೇನಿವೆ ಅವಕ್ಕೆ ನಾವು ಅವಕಾಶವನ್ನು ಕೊಡುವುದಿಲ್ಲ.

(ಗೊಂದಲ)

ಶ್ರೀ ಬಸವರಾಜ ರಾಯರೆಡ್ಡಿ: ಅದನ್ನು ಅವರು ವಾಪಸ್ಸು ತೆಗೆದುಕೊಳ್ಳಬೇಕು.

ಅಧ್ಯಕ್ಷರು: ಅವರು ಏನು ಹೇಳುತ್ತಾರೋ ಕೇಳಿ.